ರಸ್ತೆಗಳನ್ನು ಅಭಿವೃದ್ಧಿಗೊಳಿಸುವುದು

289 (281) ಶ್ರೀ ಸುನೀಲ್ ವಿ. ಹೆಗಡೆ (ಹಳಿಯಾಳ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಜೋಯಿಡಾ ಕ್ಷೇತ್ರದ ರಸ್ತೆಗಳನ್ನು ಮೇಲ್ದರ್ಜೆಗೇರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಈ ರಸ್ತೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಳಾಗಿರುವ ರಸ್ತೆಗಳನ್ನು ದುರಸ್ತಿಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ಮಾಹಿತಿ ನೀಡುವುದು)

ಈ) ರಸ್ತೆಗಳು ಹಾಳಾಗಿರುವುದರಿಂದ ಸಾರ್ವಜನಿಕ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಉ) ಹಾಗಿದ್ದಲ್ಲಿ, ಈ ರಸ್ತೆಗಳನ್ನು ಯಾವಾಗ ದುರಸ್ತಿಗೊಳಿಸಲಾಗುವುದು ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):

ಅ) ಲೋಕೋಪಯೋಗಿ ಕಾರವಾರ ವಿಭಾಗಕ್ಕೆ ಸಂಬಂಧಿಸಿದ ಜೋಯಿಡಾ ತಾಲ್ಲೂಕಿನ 94.75 ಕಿ.ಮೀ. ಉದ್ದದ ಒಟ್ಟು 16 ಗ್ರಾಮೀಣ ರಸ್ತೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ಲೋಇ 463 ಸಿಆರ್‌ಎಂ 2008, ಬೆಂಗಳೂರು, ದಿನಾಂಕ: 26.8.2008ರಲ್ಲಿ ಜಿಲ್ಲಾ ಮುಖ್ಯ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.

ಆ) ಮೇಲ್ದರ್ಜೆಗೇರಿಸಲಾದ ಈ ಜಿಲ್ಲಾ ಮುಖ್ಯ ರಸ್ತೆಗಳು ಈ ಹಿಂದೆ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗ, ಕಾರವಾರರವರ

ವಶದಲ್ಲಿದ್ದು, ಹಾಲಿ ಇದ್ದ ಸ್ಥಿತಿಯಲ್ಲಿಯೇ ಹಸ್ತಾಂತರಿಸಿರುತ್ತಾರೆ. ಅವುಗಳ ದುರಸ್ತಿಗಾಗಿ ಅನುದಾನ ಲಭ್ಯತೆಗನುಸಾರವಾಗಿ, ಆದ್ಯತೆಯ ಮೇರೆಗೆ ಹಂತ ಹಂತವಾಗಿ ರಸ್ತೆಯನ್ನು ದುರಸ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ) ಪ್ರಸಕ್ತ ಸಾಲಿನಲ್ಲಿ ಜಿಲ್ಲಾ ಮುಖ್ಯ ರಸ್ತೆಗಳ ಮಳೆಗಾಲದ ಪೂರ್ವದ ಕಾಮಗಾರಿಗಳನ್ನು ಕೈಗೊಳ್ಳಲು ಪ್ರತಿ ಕಿ.ಮೀ.ಗೆ ರೂ. 19,280.00 ರಂತೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಮಳೆಗಾಲದ ನಂತರದ ಕಾಮಗಾರಿಗಳಾದ ರಸ್ತೆ ತಗ್ಗು ಗುಂಡಿಗಳನ್ನು ತುಂಬಲು ಪ್ರತಿ ಕಿ.ಮೀ.ಗೆ ರೂ. 13,840.00 ರಂತೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಇದರಂತೆ ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಗಮನಿಸಲಾಗಿದೆ.

ಉ) ಇತ್ತೀಚೆಗೆ ಮೇಲ್ದರ್ಜೆಗೇರಿಸಿದ (ಜಿಲ್ಲಾ ಪಂಚಾಯತ್‌ನಿಂದ ಹಸ್ತಾಂತರಗೊಂಡ) ಒಟ್ಟು 94.75 ಕಿ.ಮೀ. ಉದ್ದದ ರಸ್ತೆಗಳನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಪಡಿಸಲು (ದೊಡ್ಡ ಸೇತುವೆಗಳನ್ನು ಹೊರತುಪಡಿಸಿ) ರೂ. 2200.00 ಲಕ್ಷಗಳು ಬೇಕಾಗುವುದೆಂದು ಅಂದಾಜಿಸಲಾಗಿದೆ. ಸೂಕ್ತ ಕಾರ್ಯಕ್ರಮದಡಿ ಪ್ರಸ್ತಾವನೆಗಳನ್ನು ಸ್ವೀಕರಿಸಿದ ನಂತರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು. ಪ್ರಸ್ತುತ ಲಭ್ಯವಿರುವ ನಿರ್ವಹಣಾ ಅನುದಾನದಲ್ಲಿ ಗುಂಡಿಗಳನ್ನು ತುಂಬಿ ವಾಹನ ಸಂಚಾರಕ್ಕೆ ಯೋಗ್ಯವಾಗಿಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸೇತುವೆಗಳ ಕಾಮಗಾರಿಗಳು

290 (293) ಶ್ರೀ ಸುನೀಲ್ ವಿ. ಹೆಗಡೆ (ಹಳಿಯಾಳ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?